**Fax:** 08282-256262
**E-mail:**kuvempuacademic@gmail.com

Phone No - 08282-256149
**Website :**www.kuvempu.ac.in

# ಕುವೆಂಪು ವಿಶ್ವವಿದ್ಯಾಲಯ

ಶೈಕ್ಷಣಿಕ ವಿಭಾಗ, ವಿಶ್ವವಿದ್ಯಾಲಯ ಕಾರ್ಯಾಲಯ, ಕುವೆಂಪು ಶತಮಾನೋತ್ಸವ ಭವನ,
ಜ್ಞಾನ ಸಹ್ಯಾದ್ರಿ, ಶಂಕರಘಟ್ಟ – 577 451, ಶಿವಮೊಗ್ಗ ಜಿಲ್ಲೆ.

**Re-Accredited by NAAC with "A" Grade, Ranked 73rd place in NIRF-2019 & 45th Place at National Level in SCIMAGO Rankings**

ಸಂಖ್ಯೆ:ಕುವಿ:ಶೈವಿ:ಎಸಿ–6: 2016 :2022–23 ದಿನಾಂಕ:25–08–2022

## ಪರಿಷ್ಕೃತ ಅಧಿಸೂಚನೆ –2

**ವಿಷಯ:– 2022–23ನೇ ಶೈಕ್ಷಣಿಕ ಸಾಲಿನ ನೂತನ ರಾಷ್ಟ್ರೀಯ ಶಿಕ್ಷಣ ನೀತಿಯನ್ವಯ ವಿಶ್ವವಿದ್ಯಾಲಯದ ಪ್ರಥಮ ವರ್ಷದ ವಿವಿಧ ಸ್ನಾತಕ ಪದವಿಗಳ ಆನ್‌ಲೈನ್ ಪ್ರವೇಶಾತಿ ಅವಧಿ ವಿಸ್ತರಿಸಿರುವ ಕುರಿತು.**

ಉಲ್ಲೇಖ:– 1. ಈ ಕಛೇರಿ ಅಧಿಸೂಚನೆ ಸಂಖ್ಯೆ:ಕುವಿ:ಶೈವಿ:ಎಸಿ–6:1377:2022–23, ದಿನಾಂಕ:27–06–2022.
2. ಈ ಕಛೇರಿ ಪರಿಷ್ಕೃತ ಅಧಿಸೂಚನೆ ಸಂಖ್ಯೆ:ಕುವಿ:ಶೈವಿ:ಎಸಿ–6:1926:2022–23, ದಿನಾಂಕ:01–08–2022.
3. ಈ ಕಛೇರಿ ಪರಿಷ್ಕೃತ ಅಧಿಸೂಚನೆ– 1ರ ಸಂಖ್ಯೆ:ಕುವಿ:ಶೈವಿ:ಎಸಿ–6:1955:2022–23, ದಿನಾಂಕ:10–08–2022.
4. ಸರ್ಕಾರದ ಆದೇಶ ಸಂಖ್ಯೆ:ಇಡಿ/217/ಯುಎನ್‌ಇ/2022, ಬೆಂಗಳೂರು, ದಿ:17–08–2022.
5. ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ:20–08–2022.

* * * * *

**2022–23ನೇ ಶೈಕ್ಷಣಿಕ** ಸಾಲಿನ ವಿವಿಧ ಸ್ನಾತಕ ಪದವಿಗಳ ಪ್ರಥಮ ವರ್ಷದ ಪ್ರವೇಶಾತಿಯನ್ನು ಆನ್‌ಲೈನ್ ಮೂಲಕ ನಿರ್ವಹಿಸಲು ಉಲ್ಲೇಖಿತ (1)ರ ಅಧಿಸೂಚನೆಯಲ್ಲಿ ಈಗಾಗಲೇ ತಿಳಿಸಲಾಗಿತ್ತು.

**ಮುಂದುವರೆದಂತೆ, ಉಲ್ಲೇಖಿತ (4)ರ ಸರ್ಕಾರದ ಆದೇಶಾನುಸಾರ ಈ ಕೆಳಕಂಡಂತೆ ವಿವಿಧ ಸ್ನಾತಕ ಪದವಿಗಳ ಪ್ರಥಮ ವರ್ಷದ ಪ್ರವೇಶಾತಿ ದಿನಾಂಕಗಳನ್ನು ವಿಸ್ತರಿಸಲಾಗಿದೆ.**

| | | |
|---|---|---|
| **01** | **ರೂ. 1000/–ಗಳ ದಂಡ ಶುಲ್ಕದೊಂದಿಗೆ ಪ್ರಥಮ ವರ್ಷದ** ಪ್ರಥಮ ಸೆಮಿಸ್ಟರ್ ಪದವಿಗೆ ಪ್ರವೇಶ ಪಡೆಯಲು ಕಡೆಯ ದಿನಾಂಕ (ಯು.ಜಿ.ಸಿ. ನಿಯಮಾವಳಿ ಹಾಗೂ ಸರ್ಕಾರದ ಪತ್ರದನ್ವಯ ನಿಗದಿಪಡಿಸಿದೆ.) | **29–08–2022** ರಿಂದ **15–09–2022** |

**ಷರಾ: ಮುಂದುವರೆದು, ದ್ವಿತೀಯ ಪದವಿ ಪೂರ್ವ ಪೂರಕ ಪರೀಕ್ಷೆಯಲ್ಲಿ ಉತ್ತೀರ್ಣರಾಗುವ ವಿದ್ಯಾರ್ಥಿಗಳಿಗೆ ದಂಡರಹಿತವಾಗಿ ಪೂರಕ ಪರೀಕ್ಷೆಯ ಫಲಿತಾಂಶ ಘೋಷಣೆ ಆಗುವ ದಿನಾಂಕದಿಂದ ಒಂದು ವಾರದೊಳಗೆ ಪ್ರವೇಶಾತಿ ಪಡೆಯಲು ಅವಕಾಶವನ್ನು ನೀಡಲಾಗಿದೆ.**

**ಉಳಿದಂತೆ ಉಲ್ಲೇಖಿತ (1, 2&3)ರ ಅಧಿಸೂಚನೆಗಳಲ್ಲಿ ಯಾವುದೇ ಬದಲಾವಣೆಗಳು ಇರುವುದಿಲ್ಲ.**

ಮಾನ್ಯ ಕುಲಸಚಿವರ ಅನುಮೋದನೆಯಾಗಿದೆ

ಉಪಕುಲಸಚಿವರು

ಉಪ ಕುಲಸಚಿವ
ಶೈಕ್ಷಣಿಕ ವಿಭಾಗ,
ಕುವೆಂಪು ವಿಶ್ವವಿದ್ಯಾನಿಲಯ
ಜ್ಞಾನ ಸಹ್ಯಾದ್ರಿ, ಶಂಕರಘಟ್ಟ – 577 451.
ಶಿವಮೊಗ್ಗ ಜಿ.

RHS 25/8/2022

ಗೆ,

ವಿಶ್ವವಿದ್ಯಾಲಯದ ಎಲ್ಲಾ ಸಂಯೋಜಿತ ಸ್ನಾತಕ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ಹಾಗೂ ಘಟಕ ಕಾಲೇಜುಗಳು, ಶಿವಮೊಗ್ಗ, ಚಿಕ್ಕಮಗಳೂರು ಮತ್ತು ನೇರ ಆಡಳಿತಕ್ಕೊಳಪಟ್ಟ ಕಾಲೇಜು, ಶಂಕರಘಟ್ಟ.

ಪ್ರತಿಗಳು:

1. ಆಪ್ತ ಸಹಾಯಕರು, ಕುಲಪತಿಗಳು: ಕುಲಸಚಿವರು: ಕುಲಸಚಿವರು(ಪ): ಹಣಕಾಸು ಅಧಿಕಾರಿಗಳು, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.
2. ಪ್ರೊ. ಅಶ್ಫಕ್ ಅಹಮದ್, ನೋಡಲ್ ಅಧಿಕಾರಿಗಳು, NEP-2020/ UUCMS, ಸ್ನಾತಕೋತ್ತರ ಭೂ ವಿಜ್ಞಾನ ವಿಭಾಗ. ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ,
3. ಕಛೇರಿ ಪ್ರತಿ.

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- 2022-23 ನೇ ಸಾಲಿನ ಸ್ನಾತಕ/ಸ್ನಾತಕೋತ್ತರ ಶೈಕ್ಷಣಿಕಾ ವೇಳಾಪಟ್ಟಿ ಬಗ್ಗೆ.

ಓದಲಾಗಿದೆ:- 1. ಸರ್ಕಾರದ ಆದೇಶ ಸಂಖ್ಯೆ:ಇಡಿ 217 ಯುಎನ್‌ಇ 2022, ದಿನಾಂಕ:09.02.2022.

2. ಉಪಾಧ್ಯಕ್ಷರು ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ ರವರ ಪತ್ರದ ದಿನಾಂಕ: 16.08.2022.

******

## ಪ್ರಸ್ತಾವನೆ:-

ಮೇಲೆ ಓದಲಾದ (1) ದಿನಾಂಕ:09.02.2022 ರ ಆದೇಶದಲ್ಲಿ, 2022-23ನೇ ಶೈಕ್ಷಣಿಕ ಸಾಲಿನ ಸ್ನಾತಕ/ಸ್ನಾತಕೋತ್ತರ ಶೈಕ್ಷಣಿಕ ವೇಳಾಪಟ್ಟಿಯನ್ನು ಉನ್ನತ ಶಿಕ್ಷಣ ಇಲಾಖೆಯಡಿಯಲ್ಲಿ ಬರುವ ವಿಶ್ವವಿದ್ಯಾಲಯಗಳು/ಕಾಲೇಜು ಶಿಕ್ಷಣ/ ಅನುದಾನ/ಅನುದಾನ ರಹಿತ ಕಾಲೇಜುಗಳಲ್ಲಿ (ತಾಂತ್ರಿಕ ಶಿಕ್ಷಣವನ್ನು ಹೊರತುಪಡಿಸಿ) ಜಾರಿಗೊಳಿಸುವಂತೆ ಆದೇಶವನ್ನು ಹೊರಡಿಸಲಾಗಿದೆ.

ಮೇಲೆ ಓದಲಾದ (2) ದಿನಾಂಕ:16.08.2022 ರ ಪತ್ರದಲ್ಲಿ, ಉಪಾಧ್ಯಕ್ಷರು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ ರವರು ರಾಜ್ಯದಲ್ಲಿ ಪ್ರಸ್ತುತ ದ್ವಿತೀಯ ಪದವಿ ಪೂರ್ವದ ಪೂರಕ ಪರೀಕ್ಷೆಗಳು ನಡೆಯುತ್ತಿದ್ದು, ಪರೀಕ್ಷೆ ಮುಕ್ತಾಯಗೊಂಡ ಕೆಲವು ದಿನಗಳಲ್ಲಿ ಫಲಿತಾಂಶ ಪ್ರಕಟಗೊಳ್ಳುವ ಕಾರಣ, ಪದವಿ ಪೂರ್ವ ಪರೀಕ್ಷೆಯಲ್ಲಿ ಈಗಾಗಲೇ ಉತ್ತೀರ್ಣರಾಗಿರುವ ವಿದ್ಯಾರ್ಥಿಗಳ ಹಾಗೂ ಪೂರಕ ಪರೀಕ್ಷಯ ಫಲಿತಾಂಶದ ನಿರೀಕ್ಷಣೆಯಲ್ಲಿರುವ ವಿದ್ಯಾರ್ಥಿಗಳ ಪದವಿ ವಿದ್ಯಾಭ್ಯಾಸದ ಹಿತದೃಷ್ಟಿಯಿಂದ ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳು ಮತ್ತು ಕಾಲೇಜುಗಳಲ್ಲಿ ತರಗತಿಗಳನ್ನು ಪ್ರಾರಂಭಿಸುವ ಹಾಗೂ ವಿದ್ಯಾರ್ಥಿಗಳ ಪ್ರವೇಶಾತಿಯನ್ನು ಈ ಹಿಂದೆ ಓದಲಾದ (1)ರ ಆದೇಶದಲ್ಲಿ ನಿಗಧಿಪಡಿಸಿರುವುದನ್ನು ಪರಿಷ್ಕರಿಸಬೇಕಾಗಿದೆ.

ಮೇಲೆ ವಿವರಿಸಿರುವ ಕಾರಣಗಳಿಂದಾಗಿ 2022-23ನೇ ಸಾಲಿನ ಸ್ನಾತಕ ತರಗತಿಗಳನ್ನು 1ನೇ ಸೆಪ್ಟೆಂಬರ್ 2022ರಿಂದಲೇ ಪ್ರಾರಂಭ ಆಗುವಂತೆ ಮತ್ತು ಪದವಿ ಕಾಲೇಜುಗಳಲ್ಲಿನ ಪ್ರವೇಶಾತಿ ಪ್ರಕ್ರಿಯೆಯನ್ನು ಸಪ್ಟೆಂಬರ್ 30ರೊಳಗಾಗಿ ಮಾತ್ರ ವಿಸ್ತರಿಸುವಂತೆ ಎಲ್ಲಾ ವಿಶ್ವವಿದ್ಯಾಲಯಗಳು ಮತ್ತು ಪದವಿ ಕಾಲೇಜುಗಳಿಗೆ ಸೂಕ್ತ ಆದೇಶ ಹೊರಡಿಸುವಂತೆ ಕೋರಿರುತ್ತಾರೆ.

ಅದರನ್ವಯ ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ ಇವರು ನೀಡಿರುವ ವರದಿಯನ್ನು ಮೇಲಿನ ಅಂಶಗಳೊಂದಿಗೆ ಪರಿಶೀಲಿಸಲಾಗಿ, ಈ ಕೆಳಕಂಡ ಆದೇಶ.

## ಸರ್ಕಾರದ ಆದೇಶ ಸಂಖ್ಯೆ: ಇಡಿ/ 217/ಯುಎನ್‌ಇ/2022, ಬೆಂಗಳೂರು, ದಿನಾಂಕ: 17-08-2022.

ಮೇಲೆ ಪ್ರಸ್ತಾವನೆಯಲ್ಲಿ ಕೂಲಂಕಷವಾಗಿ ವಿವರಿಸಿದಂತೆ, ಉನ್ನತ ಶಿಕ್ಷಣ ಇಲಾಖೆಯಡಿಯಲ್ಲಿ ಬರುವ ವಿಶ್ವವಿದ್ಯಾಲಯಗಳು/ಕಾಲೇಜು ಶಿಕ್ಷಣ/ ಅನುದಾನ/ಅನುದಾನ ರಹಿತ ಕಾಲೇಜುಗಳಲ್ಲಿ (ತಾಂತ್ರಿಕ ಶಿಕ್ಷಣವನ್ನು ಹೊರತುಪಡಿಸಿ) 2022-23ನೇ ಸಾಲಿನ ಸ್ನಾತಕ ತರಗತಿಗಳನ್ನು ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ 1ನೇ ಸೆಪ್ಟೆಂಬರ್ 2022 ರಿಂದ ಪ್ರಾರಂಭ ಆಗುವಂತೆ ಮತ್ತು ಪದವಿ ಕಾಲೇಜುಗಳಲ್ಲಿನ ಪ್ರವೇಶಾತಿ ಪ್ರಕ್ರಿಯೆಯನ್ನು 15 ಸಪ್ಟೆಂಬರ್ ರವರೆಗೆ ವಿಸ್ತರಿಸಿ ಆದೇಶಿಸಿದೆ.

...2

AL 3.6

RAUS 17/8/2022 17/8/22 17/8/22

ಮುಂದುವರೆದು ದ್ವಿತೀಯ ಪದವಿ ಪೂರ್ವ ಪೂರಕ ಪರೀಕ್ಷೆಯಲ್ಲಿ ಉತ್ತೀರ್ಣರಾಗುವ ವಿದ್ಯಾರ್ಥಿಗಳಿಗೆ ದಂಡರಹಿತವಾಗಿ ಪೂರಕ ಪರೀಕ್ಷೆಯ ಫಲಿತಾಂಶ ಘೋಷಣೆ ಆಗುವ ದಿನಾಂಕದಿಂದ ಒಂದು ವಾರದೊಳಗೆ ಪ್ರವೇಶಾತಿ ಪಡೆಯಲು ಅವಕಾಶವನ್ನು ನೀಡಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಶೀತಲ್.ಎಂ.ಹಿರೇಮಠ)
ಸರ್ಕಾರದ ಅಧೀನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯಗಳು-1)

17/8/22

ಇವರಿಗೆ:-

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
2. ಸರ್ಕಾರದ ಪ್ರಾಧನ ಕಾರ್ಯದರ್ಶಿಗಳು, ಹಿಂದುಳಿದ ವರ್ಗಗಳು ಮತ್ತು ಅಲ್ಪ ಸಂಖ್ಯಾತರ ಕಲ್ಯಾಣ ಇಲಾಖೆ.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ.
4. ಆಯುಕ್ತರು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ, ಬೆಂಗಳೂರು.
5. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
6. ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
7. ಕುಲಪತಿಗಳು, ಉನ್ನತ ಶಿಕ್ಷಣ ಇಲಾಖೆಯಡಿಯಲ್ಲಿ ಬರುವ ಎಲ್ಲಾ ವಿಶ್ವವಿದ್ಯಾಲಯಗಳು.
8. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್, ಬೆಂಗಳೂರು.
9. ರಾಜ್ಯದ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಕಾಲೇಜುಗಳ ಪ್ರಾಂಶುಪಾಲರು (ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ ಮುಖಾಂತರ)
10. ಉನ್ನತ ಶಿಕ್ಷಣ ಇಲಾಖೆಯಡಿಯಲ್ಲಿ ಬರುವ ಎಲ್ಲಾ ವಿಶ್ವವಿದ್ಯಾಲಯಗಳ ಕುಲಸಚಿವರು.
11. ಉನ್ನತ ಶಿಕ್ಷಣ ಇಲಾಖೆಯಡಿಯಲ್ಲಿ ಬರುವ ವಿಶ್ವವಿದ್ಯಾಲಯಗಳಡಿಯಲ್ಲಿ ಬರುವ
12. ಎಲ್ಲಾ ಕಾಲೇಜುಗಳು (ಸಂಬಂಧಪಟ್ಟ ವಿಶ್ವವಿದ್ಯಾಲಯಗಳ ಮುಖಾಂತರ).
13. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.

<u>ಪ್ರತಿ:</u>

1. ಮಾನ್ಯ ಉನ್ನತ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಕಾಸಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.